ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2009ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: (ಅನುಬಂಧ–IV) ವಿಧೇಯಕವನ್ನು ಮಂಡಿಸಲಾಗಿದೆ.

5. ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2009ರ ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2009ರ ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2009ರ ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: (ಅನುಬಂಧ–V) ವಿಧೇಯಕವನ್ನು ಮಂಡಿಸಲಾಗಿದೆ.

ಅಧ್ಯಕ್ಷರು: ಈಗ ಮಾನ್ಯ ಮುಖ್ಯಮಂತ್ರಿಗಳಿಂದ ಹೇಳಿಕೆ.